KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-169
ಶನಿವಾರ 10 ಮೇ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ಶಿರಾ ತಾಲೂಕು ಚಿಕ್ಕತಿಮ್ಮ ನಹಳ್ಳಿ ಗ್ರಾಮದಲ್ಲಿ ನಡೆದ ಕುನ್ನಾಲ ಶ್ರೀ ಮರಿಯಮ್ಮ ದೇವಿ ಜಾತ್ರಾ ಮಹೋತ್ಸ ವದಲ್ಲಿ ಪಾಲ್ಗೊಂಡ ವಿ.ಪ. ಸದಸ್ಯ ಚಿದಾನಂದ್ ಎಂ.ಗೌಡ ಅವರನ್ನು ಅಭಿನಂದಿಸಲಾಯಿತು. ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕ ಎಸ್.ಆರ್.ಗೌಡ ಸೇರಿದಂತೆ ಅನೇಕ ಪ್ರಮುಖರು ಇದ್ದರು.

## ಕೆಎನ್‌ಆರ್ ಅಮೃತ ಮಹೋತ್ಸವ ಮುಂದೂಡಿಕೆ: ಎಂಎಲ್‌ಸಿ ರಾಜೇಂದ್ರ

ತುಮಕೂರು: ಸಹಕಾರ ಸಚಿವರಾದ ಕೆ.ಎನ್.ರಾಜಣ್ಣ ಅವರ ಅಭಿಮಾನಿಗಳು, ಹಿತೈಷಿಗಳು, ಸಹಕಾರ ಕ್ಷೇತ್ರದ ಜನರು ಕೆ.ಎನ್.ಆರ್‌ಅವರಿಗೆ 75 ವರ್ಷ ತುಂಬಿದ ಹಿನ್ನೆಲೆಯಲ್ಲಿ ಮೇ.13 ರಂದು ಆಯೋಜಿಸಿದ್ದ ಅಮೃತ ಮಹೋತ್ಸವ ಹಾಗೂ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭವನ್ನು, ದೇಶದಲ್ಲಿ ಯುದ್ದದ ಕಾರ್ಮೋಡ ಕವಿದಿರುವ ಹಿನ್ನೆಲೆಯಲ್ಲಿ ಭಾರತದ ಸೈನಿಕರಿಗೆ ಬೆಂಬಲವಾಗಿ ನಿಲ್ಲುವ ಉದ್ದೇಶದಿಂದ ಮುಂದೂಡಲಾಗಿದೆ ಎಂದು ವಿಧಾನಪರಿಷತ್ ಸದಸ್ಯ ಆರ್.ರಾಜೇಂದ್ರ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ದಾಳಿಯ ಪ್ರತಿಕಾರವಾಗಿ ಭಾರತ ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿರುವುದು ಪಾಕಿಸ್ಥಾನ ಮತ್ತು ಭಾರತದ ನಡುವೆ ಯುದ್ದದ ವಾತಾವರಣ ನಿರ್ಮಾಣವಾಗಿದೆ. ಎರಡು ದೇಶಗಳ ನಡುವೆ ನಡೆಯುತ್ತಿರುವ ಕ್ಷಿಪಣ್ಣಿ ಮತ್ತು ಯುದ್ದ ವಿಮಾನಗಳ ಶೆಲ್ ದಾಳಿಯಿಂದ ಉಗ್ರರ ನೆಲೆಗಳು ದ್ವಂಶಗೊಂಡಿವೆ.



ಇಂತಹ ಸಂದರ್ಭದಲ್ಲಿ ಭಾರತೀಯರೆಲ್ಲರೂ ಸೈನಿಕರೊಂದಿಗೆ ನಿಲ್ಲಬೇಕಾಗಿದೆ. ಹಾಗಾಗಿ ಮೇ.13ರ ಕಾರ್ಯಕ್ರಮವನ್ನು ಮುಂದೂಡಿದ್ದು,ದೇಶದಲ್ಲಿ ವಾತಾವರಣ ತಿಳಿಗೊಂಡ ನಂತರ ಕಾರ್ಯಕ್ರಮದ ಮುಂದಿನ ದಿನಾಂಕವನ್ನು ಅಭಿನಂದನಾ ಸಮಿತಿ ತಿಳಿಸಲಿದೆ ಎಂದರು.

ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾಧಕರು ದಾಳಿ ನಡೆಸಿದ್ದಾರೆ. ಭಯೋತ್ಪಾಧಕರಿಗೆ ಜಾತಿ, ಧರ್ಮ ಎಂಬುದು ಇಲ್ಲ. ಹಾಗಾಗಿ ಒಂದು ಸಮುದಾಯವನ್ನು ಗುರಿಯಾಗಿಸಿ ಕೊಂಡು ಹೀಯಾಳಿಸುವುದು ತರವಲ್ಲ. ಈ ಹಿಂದೆ ರಾಷ್ಟ್ರಪಿತ ಮಹಾತ್ಮಗಾಂಧಿ ಅವರನ್ನು ಕೊಂದಿದ್ದು ಸಹ ಓರ್ವ ವ್ಯಕ್ತಿ, ಆದರೆ ಅಂದು ಕೊಲೆ ಮಾಡಿದ ವ್ಯಕ್ತಿಯನ್ನು ಮಾತ್ರ ಅಪರಾದಿ ಎಂದು ತೀರ್ಮಾನಿಸಲಾಯಿತೇ ಹೊರತು, ಆತನ ಧರ್ಮ ಮತ್ತು ಸಮುದಾಯವನ್ನಲ್ಲ. ಇಂದಿರಾಗಾಂಧಿ ಅವರಿಗೆ ಅವರ ಅಂಗರಕ್ಷಕರೇ ಗುಂಡಿಟ್ಟುಕೊಂದಾಗ, ಗುಂಡಿಟ್ಟ ವ್ಯಕ್ತಿಗಳ ಸಮುದಾಯವನ್ನು ಅಪರಾಧಿ ಎಂಬಂತೆ ಜನತೆ ನಡೆದುಕೊಳ್ಳಲಿಲ್ಲ. ಈ ಘಟನೆಯಲ್ಲಿಯೂ ಒಂದು ಸಮುದಾಯವನ್ನು ಗುರಿಯಾಗಿಸುವುದು ಭಾರತದಂತಹ ಬಹುಸಂಸ್ಕೃತಿಯ ನಾಡಿಗೆ ತರವಲ್ಲ ಎಂದು ಆರ್.ರಾಜೇಂದ್ರ ನುಡಿದರು.

ಅಭಿನಂದನಾ ಸಮಿತಿ ಅಧ್ಯಕ್ಷರಾದ ಪತ್ರಕರ್ತ ಎಸ್.ನಾಗಣ್ಣ ಮಾತನಾಡಿ, ಸುಮಾರು 600 ಪುಟುಗಳ ಎರಡು ಸಂಪುಟಗಳನ್ನು ಒಳಗೊಂಡಂತೆ ಸಹಕಾರ ಸಚಿವ ಸಮಗ್ರ ಜೀವನ ಮತ್ತು ಸಾಧನೆಯನ್ನು ಒಳಗೊಂಡ ಅಭಿನಂದನಾ ಗ್ರಂಥ ಮುದ್ರಣ ಆರಂಭವಾಗಿತ್ತು. ಆದರೆ ದೇಶದಲ್ಲಿ ಪಾಕಿಸ್ಥಾನ ಮತ್ತು ಭಾರತದ ನಡುವೆ ಉದ್ವಿಗ್ನ ಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಮೇ.13 ರ ಕಾರ್ಯಕ್ರಮ ಮುಂದೂಡಲಾಗಿದೆ. ಮುಂದಿನ ದಿನಗಳಲ್ಲಿಯೂ ಇಷ್ಟೇ ಆಸಕ್ತಿಯಿಂದ ಕಾರ್ಯಕ್ರಮ ಆಯೋಜಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಅಭಿನಂದನಾ ಸಮಿತಿ ಮುರುಳೀ ಕೃಷ್ಣಪ್ಪ, ಎನ್.ಗೋವಿಂದರಾಜು, ಗಂಗಣ್ಣ, ಕೆ.ಎ.ದೇವರಾಜು, ಧನಿಯಕುಮಾರ್, ಲಕ್ಷ್ಮಿನಾರಾಯಣ್, ಕೊಟ್ಟ ಶಂಕರ್, ಪಿ.ಮೂರ್ತಿ, ಡ್ಯಾಗೇರಹಳ್ಳಿ ವಿರೂಪಾಕ್ಷ, ನಾರಾಯಣಗೌಡ, ಟಿ.ಪಿ.ಮಂಜುನಾಥ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮೇ 12ರಂದು ಭಗವಾನ್ ಬುದ್ಧ ಜಯಂತಿ

ತುಮಕೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಬುದ್ಧ ಧಮ್ಮ ಪ್ರತಿಷ್ಠಾನ ಹಾಗೂ ಧಮ್ಮ ಲೋಕ ಬುದ್ಧ ವಿಹಾರದ ಸಂಯುಕ್ತಾಶ್ರಯದಲ್ಲಿ ಮೇ 12ರಂದು ಮಧ್ಯಾಹ್ನ 3 ಗಂಟೆಗೆ ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ "ಭಗವಾನ್ ಬುದ್ಧ ಜಯಂತಿ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಅಂದು ಮಧ್ಯಾಹ್ನ 2 ಗಂಟೆಗೆ ಮಹಾನಗರಪಾಲಿಕೆ ಆವರಣದಿಂದ ಅಶೋಕರಸ್ತೆ ಮೂಲಕ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದವರೆಗೆ ಭಗವಾನ್ ಬುದ್ಧರ ಭಾವಚಿತ್ರದ ಮೆರವಣಿಗೆಯನ್ನು ಏರ್ಪಡಿಸಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಜಿಲ್ಲೆಯ ಸಂಸದರು, ಸಚಿವರು, ಶಾಸಕರು, ಗಣ್ಯರು ಸೇರಿದಂತೆ ವಿವಿಧ ಅಧಿಕಾರಿಗಳು ಭಾಗವಹಿಸುವರು.

## ಡೀಸಿ ಆದೇಶ: ಸಂವಿಧಾನಕ್ಕೆ ವಿರುದ್ಧ

ತುಮಕೂರು: ಅನ್ಯಾಯ ಮತ್ತು ಹಕ್ಕುಗಳ ರಕ್ಷಣೆಗಾಗಿ ಶಾಂತಿಯುತವಾಗಿ ಪ್ರತಿಭಟಿಸುವ ಹಕ್ಕನ್ನು ಭಾರತದ ಸಂವಿಧಾನ ನೀಡಿದೆ. ಆದರೆ ತುಮಕೂರು ಜಿಲ್ಲಾಧಿಕಾರಿಗಳು ಸಭೆ ಸಮಾರಂಭಗಳನ್ನು ನಡೆಸಲು ಪ್ರತಿಭಟನೆಯನ್ನು ನಡೆಸಲು, ಸ್ಥಳದ ಅನುಮತಿ ಹೊರತುಪಡಿಸಿ, ವಿದ್ಯುತ್, ಧ್ವನಿವರ್ಧಕದ ಬಳಕೆ ಮುಂತಾದು ವುಗಳ ಸಕ್ಷಮ ಎಲ್ಲಾ ಪ್ರಾಧಿಕಾರಗಳಿಂದ ವ್ಯಾಪ್ತಿಯ ಆರಕ್ಷಕ ಇಲಾಖೆಯಿಂದ ಪ್ರತಿಭಟನೆ ನಡೆಸುವ ಪೂರ್ವದಲ್ಲಿ ಅನುಮತಿ ಪಡೆದು ಸಭೆ ಸಮಾರಂಭಗಳನ್ನು, ಪ್ರತಿಭಟನೆಗಳನ್ನು ನಡೆಸಲು ಅನುಮತಿ ಪಡೆಯಬೇಕೆಂದು ಜಿಲ್ಲಾಧಿಕರಿಗಳು ಆದೇಶಿಸಿರುವುದು ಸಂವಿಧಾನ ವಿರೋಧಿಯಾಗಿದ್ದು ಇದು ಪ್ರಜಾಪ್ರಭುತ್ವ ಮತು ಅಧಿಖಾರಶಾಹಿ ದೂರಣೆಯಾಗುತ್ತದೆ. ಆದ್ದರಿಂದ ಈ ಕೂಡಲೇ ಆಧೇಶವನ್ನು ವಾಪಸ್ಸ್ ಪಡೆಯಬೇಕು ಎಂದು ಭಾರತ ಕಮ್ಯೂನಿಸ್ಟ್ ಪಕ್ಷ ಮಾರ್ಕ್ಸ್‌ವಾದಿ, ತುಮಕೂರು ಜಿಲ್ಲಾ ಸಮಿತಿ ಆಗ್ರಹಿಸುತ್ತದೆ ಇಲ್ಲವಾದಲ್ಲಿ ಜಿಲ್ಲಾಧಿಕಾರಿಗಳ ಆದೇಶದ ವಿರುದ್ದ ಇತರೆ ಪ್ರಗತಿಪರ ಸಂಘಟನೆಗಳೊಂದಿಗೆ ಚರ್ಚಿಸಿ ಹೋರಾಟ ರೂಪಿಸಲು ಮುಂದಾಗಬೇಕಿದೆ ಎಂದು ಸಿಪಿಐ(ಎಂ) ಎಚ್ಚರಿಸಿದೆ.

## ಜಾತಿ ಸಮೀಕ್ಷೆಗೆ ಹಾಜರಾಗದ ಗಣತಿದಾರರಿಗೆ ಶೋಕಾಸ್ ನೋಟಿಸ್: ಡೀಸಿ ಖಡಕ್ ಸೂಚನೆ

ತುಮಕೂರು: ಜಿಲ್ಲೆಯಾದ್ಯಂತ ನಡೆಯುತ್ತಿರುವ ಮೇ 5 ರಿಂದ ಪರಿಶಿಷ್ಟ ಜಾತಿಯ ಉಪಜಾತಿಗಳ ಸಮಗ್ರ ಸಮೀಕ್ಷಾ ಕಾರ್ಯವು ಕೆಲ ತಾಲೂಕುಗಳಲ್ಲಿ ನಿಧಾನಗತಿಯಲ್ಲಿ ಸಾಗುತ್ತಿದ್ದು, ನಿರೀಕ್ಷಿತ ಮಟ್ಟದಲ್ಲಿ ಸಮೀಕ್ಷಾ ಕಾರ್ಯ ನಡೆಯುತ್ತಿಲ್ಲ. ಈ ಹಿನ್ನೆಲೆಯಲ್ಲಿ ಸಮೀಕ್ಷಾ ಕಾರ್ಯಕ್ಕೆ ಹಾಜರಾಗದ ಗಣತಿದಾರರಿಗೆ ಶೋಕಾಸ್ ನೋಟಿಸ್ ನೀಡಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಡಿಡಿಪಿಐಗಳಿಗೆ ಖಡಕ್ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಕೆಸ್ವಾನ್ ಸಭಾಂಗಣದಲ್ಲಿ ಶುಕ್ರವಾರ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಮಗ್ರ ಪರಿಶಿಷ್ಟ ಜಾತಿ ಉಪಜಾತಿಯ ಸಮೀಕ್ಷೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ಗಣತಿದಾರರು ಪ್ರಾಮಾಣಿಕತೆ ಹಾಗೂ ನಿಶ್ಠೆಯಿಂದ ಸಮೀಕ್ಷೆಯನ್ನು ನಡೆಸಬೇಕು. ನೋಡಲ್ ಅಧಿಕಾರಿಗಳು ಪ್ರತಿ ದಿನಗಳಿಗೊಮ್ಮೆ ಸಮೀಕ್ಷೆ ನಡೆಯುವ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು. ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರತಿದಿನ ಗಣತಿ ನಡೆಯುವ ಸ್ಥಳಕ್ಕೆ ಭೇಟಿ ನೀಡಿ ಗಣತಿದಾರರಿಗೆ ಮಾರ್ಗದರ್ಶನ ನೀಡಬೇಕು ಎಂದು ನಿರ್ದೇಶನ ನೀಡಿದರು.

ಪರಿಶಿಷ್ಟ ಜಾತಿ ಸಮೀಕ್ಷೆಯನ್ನು ಯಾವುದೇ ಗೊಂದಲಗಳುಂಟಾಗದಂತೆ ನಡೆಸಿ ನೈಜ ಮಾಹಿತಿಯನ್ನು ಸಂಗ್ರಹಿಸಬೇಕು. ನೆಟ್ವರ್ಕ್ ಸಮಸ್ಯೆ ಹಾಗೂ ತಾಂತ್ರಿಕ ಅಡಚಣೆಗಳಿಂದಾಗಿ ಸಮೀಕ್ಷೆ ವಿಳಂಬವಾಗುತ್ತಿರುವ ಬಗ್ಗೆ ನೋಡಲ್ ಅಧಿಕಾರಿಗಳು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಾಗ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಸಮೀಕ್ಷಾ ಆ್ಯಪ್ ಅನ್ನು ಈಗ ಅಪ್‌ಗ್ರೇಡ್ ಮಾಡಲಾಗಿದ್ದು, ಗಣತಿದಾರರು ಈ ಆ್ಯಪ್‌ನಲ್ಲಿ ಸುಲಭವಾಗಿ ಕಾರ್ಯ ನಿರ್ವಹಿಸಬಹುದಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಪಾಲಿಕೆ ಆಯುಕ್ತ ಬಿ.ವಿ. ಆಶ್ವಿಜ, ಉಪ ವಿಭಾಗಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಕೃಷ್ಣಪ್ಪ, ಸಮೀಕ್ಷಾ ಕಾರ್ಯದ ನೋಡಲ್ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

## ಶೀಬಿಯಲ್ಲಿ ಇಂದು ನಾಳೆ ಕಲ್ಯಾಣೋತ್ಸವ

ತುಮಕೂರು: ತುಮಕೂರು ತಾಲ್ಲೂಕಿನ ಸುಪ್ರಸಿದ್ಧ ಧಾರ್ಮಿಕ ಕ್ಷೇತ್ರ ಶೀಬಿಯಲ್ಲಿ ನರಸಿಂಹ ಜಯಂತಿ ಅಂಗವಾಗಿ ಮೇ 10 ರಂದು ಸಂಜೆ 4 ಗಂಟೆಗೆ ಶ್ರೀ ಲೋಕಾಂಬ ಚೆಂಚುಮಾಂಬ ಸಮೇತ ಶ್ರೀ ಶೀಬಿ ನರಸಿಂಹಸ್ವಾಮಿಯವರಿಗೆ ಕಲಶ ಸ್ಥಾಪನೆ, ಕಲ್ಯಾಣೋತ್ಸವ ಹಾಗೂ ಮೇ 11 ರಂದು ಬೆಳಗ್ಗೆ ಅಷ್ಟೋತ್ತರ ಶತಕಲಶಾಭಿಷೇಕವು ನೆರವೇರಲಿದೆ ಎಂದು ದೇಗುಲದ ಶಭಾಯಿತರೂ ಹಾಗೂ ಅನುವಂಶೀಯ ಧರ್ಮಕರ್ತರೂ ಆದ ಕರಣೀಕ ನಲ್ಲಪ್ಪ ತಿಳಿಸಿದ್ದಾರೆ.

## ಇಂದು ಕುಣಿಗಲ್‌ನಲ್ಲಿ ಯುವ ಕಾಂಗ್ರೆಸ್ ಪದಗ್ರಹಣ ಸಮಾರಂಭ

ಕುಣಿಗಲ್ : ಸಮಾಜದಲ್ಲಿ ಹಿರಿಯರಿಗೆ ಗೌರವ ನೀಡುವುದನ್ನು ಮೊದಲು ಕಲಿತು ಕೊಳ್ಳಬೇಕು ಎಂದು ಜೆಡಿಎಸ್ ಮುಖಂಡ ಜಗದೀಶ್ ಡಿ ನಾಗರಾಜಯ್ಯ ಅವರಿಗೆ ತುಮುಲ್ ನಿರ್ದೇಶಕ ಹಾಗೂ ಕಾಂಗ್ರೆಸ್ ಮುಖಂಡ ಬೇಗೂರು ನಾರಾಯಣ್ ತಿಳಿ ಹೇಳಿದರು.

ಪಟ್ಟಣದಲ್ಲಿ ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಮೇ10 ಶನಿವಾರ ದಂದು ಜಿಕೆಬಿಎಮ್ ಎಸ್ ಶಾಲಾ ಆವರಣದಲ್ಲಿ ಯುವ ಕಾಂಗ್ರೆಸ್ ಪಕ್ಷದ ಪದಗ್ರಹಣ ಕಾರ್ಯಕ್ರಮವಿದೆ ಎಂದು ತಿಳಿಸಿದ ಅವರು ನಮ್ಮ ಶಾಸಕರಾದ ಡಾಕ್ಟರ್ ರಂಗನಾಥ್ ಅವರು ಕುಣಿಗಲ್ ತಾಲೂಕಿನ ವರೇ ಆಗಿದ್ದು ಅವರಿಗೆ ನೀವು ವ್ಯಕ್ತಿಗತವಾಗಿ ನಿಂದನೆ ಮಾಡುವುದನ್ನು ಬಿಡಬೇಕು ರಾಜಕೀಯವಾಗಿ ಯಾವತ್ತೂ ಜನರ ಒಳಿತಿಗಾಗಿ ಮಾಡಬೇಕು. ಕಳೆದ ಏಳು ವರ್ಷಗಳಿಂದ ಶಾಸಕರು ಸತತ ಜನ ಸೇವೆಯನ್ನು ಪ್ರಾಮಾಣಿಕವಾಗಿ ಕ್ಷೇತ್ರದ ಅಭಿವೃದ್ಧಿಯನ್ನು ರಜದಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಮಾಜಿ ಸಂಸದ ಡಿಕೆ ಸುರೇಶ್ ಅವರ ಮಾರ್ಗದರ್ಶನದಲ್ಲಿ ಮಾಡುತ್ತಿದ್ದಾರೆ ಅವರ ಬಗ್ಗೆ ಕೀಳಾಗಿ ಮಾತನಾಡುವುದನ್ನು ಬಿಡಬೇಕು, ಮಾತನಾಡುವ ಮೊದಲು ಹಿರಿಯರಾದ ಮಾಜಿ ಸಚಿವರಾದ ಹಾಗೂ ನಿಮ್ಮ ತಂದೆಯವರರಾದ ಡಿ ನಾಗರಾಜನವರ ಬಳಿ ತಿಳಿದುಕೊಂಡು ಮಾರ್ಗದರ್ಶನ ಪಡೆದುಕೊಳ್ಳುವುದು ಒಳ್ಳೆಯದು ಎಂದು ಸಲಹೆ ನೀಡಿದರು.

ಪಹಲ್ಗಾಂ ಘಟನೆಯಲ್ಲಿ ಮಡಿದವರ ಕುಟುಂಬಗಳಿಗೆ ತಾಲೂಕು ಕಾಂಗ್ರೆಸ್ ಪಕ್ಷದ ವತಿಯಿಂದ ಸಾಂತ್ವನ ಹೇಳಿದ ಅವರು ಕೇಂದ್ರ ಪಾಕಿಸ್ತಾನದ ಉಗ್ರಗಾಮಿಗಳ ವಿರುದ್ಧ ಕೇಂದ್ರ ಸರ್ಕಾರ ಯಾವುದೇ ಕ್ರಮ ತೆಗೆದುಕೊಳ್ಳಲು ಅದಕ್ಕೆ ಬೆಂಬಲ ನೀಡುತ್ತೇವೆ ಎಂದರು.

ಬೇಗೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮೂರ್ತಿ, ಪುರಸಭಾಧ್ಯಕ್ಷ ರಹಮಾನ್ ಷರೀಫ್ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ವಿ ಎಸ್ ಎಸ್ ಎನ್ ಅಧ್ಯಕ್ಷ ಬೋರೇಗೌಡ, ಪುರಸಭಾ ಉಪಾಧ್ಯಕ್ಷ ಶ್ರೀನಿವಾಸ್, ತಾ ಪಂ ಮಾಜಿ ಸದಸ್ಯ ರಾಜಣ್ಣ, ಕಾಂಗ್ರೆಸ್ ಮುಖಂಡರಾದ ಗ್ಯಾಸ್ ನರಸಿಂಹಮೂರ್ತಿ, ಪಾಪಣ್ಣ, ಜಬಿವುಲ್ಲಾ ಹಾಗೂ ಇತರರು ಇದ್ದರು.

## ಇಂದಿನಿಂದ 17ರವರೆಗೆ ವಿವಿಧ ಪರೀಕ್ಷೆ: ನಿಷೇಧಾಜ್ಞೆ ಜಾರಿ



ತುಮಕೂರು: ತುಮಕೂರು ನಗರದಲ್ಲಿ ಮೇ 10 ರಿಂದ 17ರವರೆಗೆ ವಿವಿಧ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಯನ್ನು ಯಾವುದೇ ಲೋಪದೋಷವಿಲ್ಲದಂತೆ ಸುಸೂತ್ರವಾಗಿ ನಡೆಸಲು ಪರೀಕ್ಷಾ ಕೇಂದ್ರದ ಸುತ್ತಮುತ್ತ 200 ಮೀ. ವ್ಯಾಪ್ತಿಯೊಳಗಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶುಭ ಕಲ್ಯಾಣ್ ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ಲೋಕಸೇವಾ ಆಯೋಗದಿಂದ 2024ನೇ ಸಾಲಿನ ಅಧಿವೇಶನದ ಇಲಾಖಾ ಪರೀಕ್ಷೆ ಹಾಗೂ ವಿವಿಧ ಆಗಮ ಪ್ರಗಮ ಪ್ರವರ/ಪ್ರವೀಣ ಪ್ರಸಿದ್ದ ಪರೀಕ್ಷೆಗಳು ನಿಗಧಿತ ದಿನಾಂಕಗಳಂದು ನಡೆಯಲಿವೆ.

ನಗರದ ಅಶೋಕ ರಸ್ತೆ ಎಂಪ್ರೆಸ್ ಕರ್ನಾಟಕ ಪಬ್ಲಿಕ್ ಶಾಲೆಯ ಪರೀಕ್ಷಾ ಕೇಂದ್ರದಲ್ಲಿ ಮೇ 10 ರಿಂದ 12ರವರೆಗೆ ಇಲಾಖಾ ಪರೀಕ್ಷೆ ನಡೆಯಲಿದ್ದು, ಪರೀಕ್ಷಾ ದಿನಗಳಂದು ಬೆಳಿಗ್ಗೆ 9.30 ರಿಂದ ಸಂಜೆ 4.30 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ.

ನಗರದ ಎಂಪ್ರೆಸ್ ಗರ್ಲ್ಸ್ ಹೈಸ್ಕೂಲ್ ಹಾಗೂ ಕುಣಿಗಲ್ ತಾಲ್ಲೂಕು ಎಡೆಯೂರಿನ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿ ಸಂಸ್ಕೃತ ಕಾಲೇಜಿನ ಪರೀಕ್ಷಾ ಕೇಂದ್ರದಲ್ಲಿ ಮೇ 12 ರಿಂದ 17ರವರೆಗೆ ವಿವಿಧ ಆಗಮ ಪ್ರಗಮ ಪ್ರವರ/ಪ್ರವೀಣ ಪ್ರಸಿದ್ದ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ದಿನಗಳಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ.

ಕೆಲವು ಪ್ರಕರಣಗಳಲ್ಲಿ ದುರುದ್ದೇಶದಿಂದ ನಕಲಿ ಪ್ರಶ್ನೆ ಪತ್ರಿಕೆಗಳ ಫೋಟೋಗಳನ್ನು ತೆಗೆದು ವಾಟ್ಸ್‌ಆಪ್, ಇತರೆ ಸಾಮಾಜಿಕ ಜಾಲತಾಣಗಳ ಮೂಲಕ ಕಳುಹಿಸಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿ ಮಾಡಲು ಅವಕಾಶವಿರುವುದರಿಂದ ಪರೀಕ್ಷಾ ಮುಖ್ಯ ಅಧೀಕ್ಷಕರಿಗೆ ಕ್ಯಾಮರಾ ಹೊಂದಿರುವ ಸಾಮಾನ್ಯ ಮೊಬೈಲ್ ಇರಿಸಿಕೊಳ್ಳಲು ಅವಕಾಶವಿದೆ. ಉಳಿದ ಎಲ್ಲಾ ಪರೀಕ್ಷಾ ಸಿಬ್ಬಂದಿ/ವಿದ್ಯಾರ್ಥಿಗಳು ಮೊಬೈಲ್ ತರುವುದು/ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ.

ಈ ನಿಷೇಧಾಜ್ಞೆಯನ್ವಯ ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಬೆರಳಚ್ಚು ಕೇಂದ್ರಗಳನ್ನು ಮುಚ್ಚತಕ್ಕದ್ದು. ಜಿಲ್ಲೆಯಲ್ಲಿ ಪ್ರಶ್ನೆ ಪತ್ರಿಕೆಗಳ ಸೋರಿಕೆ ಮತ್ತು ಪರೀಕ್ಷಾ ಅಕ್ರಮಗಳಿಗೆ ಉತ್ತೇಜನ ನೀಡುವಂತಹ ವ್ಯಕ್ತಿಗಳು ಕಂಡುಬಂದಲ್ಲಿ ಅವರ ವಿರುದ್ಧ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗುವುದು. ನಿಷೇಧಾಜ್ಞೆ ಜಾರಿಯಲ್ಲಿರುವ ಅವಧಿಯಲ್ಲಿ ಅನಧಿಕೃತ ವ್ಯಕ್ತಿಗಳು ಯಾರೂ ನಿರ್ಬಂಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಹಾಗೂ ನಿಷೇಧಾಜ್ಞೆಯನ್ನು ಉಲ್ಲಂಘನೆ ಮಾಡಿದ ವ್ಯಕ್ತಿಗಳನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ಆದೇಶಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ

## ಪೂರ್ಣಗೊಂಡ ಹೊಸ ಕಟ್ಟಡ: ಸ್ವಾಧೀನಾನುಭವ ಪ್ರಮಾಣ ಪತ್ರ ಕಡ್ಡಾಯ

ತುಮಕೂರು: ಪಾಲಿಕೆ ವ್ಯಾಪ್ತಿಯಲ್ಲಿ ಹೊಸ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಂಡ ನಂತರ ಸ್ವಾಧೀನಾನುಭವ ಪ್ರಮಾಣ ಪತ್ರ/ ವಾಸಯೋಗ್ಯ ಪ್ರಮಾಣ ಪತ್ರ (Occupancy Certificate)ವನ್ನು ಪಡೆಯಲು ಕಡ್ಡಾಯವೆಂದು ಮಹಾನಗರಪಾಲಿಕೆ ಆಯುಕ್ತ ಬಿ.ವಿ. ಅಶ್ವಿಜ ಸೂಚನೆ ನೀಡಿದ್ದಾರೆ.

ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಬೆಳವಣಿಗೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಹೊರಡಿಸಿರುವ ಸುತ್ತೋಲೆ ಹಾಗೂ ಸರ್ವೋಚ್ಛ ನ್ಯಾಯಾಲಯದ ಆದೇಶದನ್ವಯ ಯಾವುದೇ ಕಟ್ಟಡ ನಿರ್ಮಾಣದಾರರು/ಮಾಲೀಕರು ತಮ್ಮ ಸ್ವತ್ತಿಗೆ ಸಂಬಂಧಿಸಿದಂತೆ ಪಾಲಿಕೆಯಿಂದ ಅಗತ್ಯ ಮಂಜೂರಾತಿ ಪರವಾನಗಿ ಪಡೆದು ಅದರಂತೆ ಕಟ್ಟಡ ನಿರ್ಮಾಣ ಕೈಗೊಂಡು ಪೂರ್ಣಗೊಂಡ ನಂತರ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯಬೇಕು.

ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆದ ನಂತರವಷ್ಟೇ ಮಾಲೀಕರು/ ಫಲಾನುಭವಿಯು ಕಟ್ಟಡದಲ್ಲಿ ವಾಸಿಸುವ ಬಗ್ಗೆ ಮುಚ್ಚಳಿಕೆ ಪ್ರಮಾಣ ಪತ್ರವನ್ನು ಪಾಲಿಕೆಗೆ ಸಲ್ಲಿಸತಕ್ಕದ್ದು.

ಕಟ್ಟಡ ನಿರ್ಮಾಣದಾರರು/ಮಾಲೀಕರು ಸ್ವತ್ತಿಗೆ ಸಂಬಂಧಿಸಿದಂತೆ ಮಹಾನಗರ ಪಾಲಿಕೆಯಿಂದ ಮಂಜೂರಾದ ಕಟ್ಟಡ ನಕ್ಷೆಯ ಪ್ರತಿಯನ್ನು ನಿರ್ಮಾಣ ಸ್ಥಳದಲ್ಲಿ ಪ್ರದರ್ಶಿಸಬೇಕು. ಅನುಮೋದಿತ ಕಟ್ಟಡ ನಕ್ಷೆಯನುಸಾರ ಕಟ್ಟಡವನ್ನು ನಿರ್ಮಿಸಲಾಗುತ್ತಿದೆಯೋ ಎಂಬ ಬಗ್ಗೆ ಮಹಾನಗರಪಾಲಿಕೆ ವಾರ್ಡ್ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರಿಂದ ಕಟ್ಟಡದ ಪ್ರಾರಂಭಿಕ ತಳಪಾಯ ಹಂತ, ಬೇಸ್‌ಮೆಂಟ್ ಹಂತ ಹಾಗೂ ಛಾವಣಿ ಹಂತದಲ್ಲಿ ಸ್ಥಳ ಪರಿಶೀಲನೆ ಮಾಡಿ ವರದಿ ನೀಡಲಾಗುವುದು. ಒಂದು ವೇಳೆ ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ನಿರ್ಮಾಣ ಕಾರ್ಯವನ್ನು ಕೈಗೊಂಡಲ್ಲಿ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು ಹಾಗೂ ಅಲ್ಲಿಯವರೆಗೆ ವಾಸಯೋಗ್ಯ ಪ್ರಮಾಣ ಪತ್ರವನ್ನು ನೀಡಲು ಅವಕಾಶವಿಲ್ಲ.

ಕಟ್ಟಡದ ನಿರ್ಮಾಣದ ಮುಕ್ತಾಯ/ ವಾಸಯೋಗ್ಯ ಪ್ರಮಾಣ ಪತ್ರ ಪಡೆದ ನಂತರವಷ್ಟೇ ಅಗತ್ಯ ಸೇವೆಗಳಾದ ವಿದ್ಯುತ್, ನೀರು ಸರಬರಾಜು ಮತ್ತು ಒಳ ಚರಂಡಿ ಸಂಪರ್ಕವನ್ನು ನೀಡಲಾಗುವುದು. ಕಟ್ಟಡ ಮಾಲೀಕರು/ನಿರ್ಮಾಣದಾರರು ಕಟ್ಟಡ ವಾಸಯೋಗ್ಯ ಪ್ರಮಾಣ ಪತ್ರ ಪಡೆದ ನಂತರವಷ್ಟೇ, ಸದರಿ ಕಟ್ಟಡದಲ್ಲಿ ಯಾವುದೇ ವ್ಯವಹಾರ/ವ್ಯಾಪಾರ ನಡೆಸಲು ಅನುಮತಿ ನೀಡಲಾಗುವುದು.

ಕಟ್ಟಡ ನಿರ್ಮಾಣದಾರರು/ಮಾಲೀಕರು ಯಾವುದೇ ಕಟ್ಟಡವನ್ನು ನಿರ್ಮಾಣ ಮಾಡುವ ಮುನ್ನ ಮಹಾನಗರಪಾಲಿಕೆಯಿಂದ ಅಗತ್ಯ ಪರವಾನಗಿಯನ್ನು ಪಡೆದುಕೊಂಡು ಅನುಮೋದಿತ ಕಟ್ಟಡ ನಕ್ಷೆಯನುಸಾರವೇ ನಿರ್ಮಾಣವನ್ನು ಕೈಗೊಂಡು, ಕಟ್ಟಡ ನಿರ್ಮಾಣ ಪೂರ್ಣಗೊಂಡ ನಂತರ ಮಹಾನಗರಪಾಲಿಕೆಯಿಂದ ವಾಸಯೋಗ್ಯ ಪ್ರಮಾಣಪತ್ರ (Occupancy Certificate)ವನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ಸದರಿ ಕಟ್ಟಡಕ್ಕೆ ವಿದ್ಯುತ್ ಸಂಪರ್ಕ. ನೀರು ಸರಬರಾಜು ಹಾಗೂ ಒಳಚಂಡಿ ಸಂಪರ್ಕ ನೀಡಲಾಗುವುದಿಲ್ಲವೆಂದು ಅವರು ತಿಳಿಯಪಡಿಸಿದ್ದಾರೆ.

## ಜಿಲ್ಲಾದ್ಯಂತ ಮಸೀದಿಗಳಲ್ಲಿ ಭಾರತೀಯ ಸೇನೆ ವಿಜಯಕ್ಕಾಗಿ ಪ್ರಾರ್ಥನೆ

ತುಮಕೂರು: ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿಯಲ್ಲಿ ಮೃತರಾದ ಜನರ ಆತ್ಮಕ್ಕೆ ಶಾಂತಿ ಕೋರಿ, ಹಾಗೆಯೇ ಉಗ್ರರ ವಿರುದ್ಧ ದಾಳಿಗೆ ಮುಂದಾಗಿರುವ ಭಾರತೀಯ ಸೇನೆ ವಿಜಯ ಸಾಧಿಸಲಿ ಎಂದು ಇಂದು ಮುಸ್ಲಿಂ ಬಾಂಧವರು ನಗರದ ಮೆಕ್ಕಾ ಮಸೀದಿ ಸೇರಿದಂತೆ ಜಿಲ್ಲೆಯ ಎಲ್ಲಾ ಮಸೀದಿಗಳಲ್ಲಿ ಮುತ್ತುವಲ್ಲಿಗಳ ನೇತೃತ್ವದಲ್ಲಿ ವಿಶೇಷ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.



ವಕ್ಫ್ ಮತ್ತು ಅಲ್ಪಸಂಖ್ಯಾತರ ಸಚಿವರಾದ ಜಮೀರ್ ಅಹಮದ್ ಖಾನ್ ಅವರ ಕರೆಯ ಮೇರೆಗೆ ರಾಜ್ಯದಲ್ಲಿ ಶುಕ್ರವಾರದ ಮಧ್ಯಾಹ್ನದ ಪ್ರಾರ್ಥನೆಯ ವೇಳೆ ದೇಶದ ಸೇನಗೆ ನೈತಿಕ ಬೆಂಬಲ ಕೋರಿ, ಹಾಗೂ ಯುದ್ದದಲ್ಲಿ ಭಾರತೀಯ ಸೇನೆಗೆ ವಿಜಯ ಲಭಿಸಲಿ ಎಂದು ಕೋರಿದರು.

ಈ ವೇಳೆ ಮಾತನಾಡಿದ ಅಲ್ಪಸಂಖ್ಯಾತ ಮುಖಂಡರಾದ ತಾಜುದ್ದೀನ್ ಷರಿಫ್,ಭಾರತದಲ್ಲಿರುವ ಮುಸ್ಲಿಂರಿಗೆ ಭಾರತವೇ ತಾಯ್ನಾಡು.ದೇಶ ಮೊದಲು ಹಾಗಾಗಿ ಪಾಕಿಸ್ಥಾನದೊಂದಿಗೆ ಆರಂಭಗೊಂಡಿರುವ ಯುದ್ದದಲ್ಲಿ ಭಾರತದ ಸೇನೆ ವಿಜಯ ಸಾಧಿಸುವುದರ ಜೊತೆಗೆ, ಪೆಹಲ್ಗಾವ್ ದಾಳಿಯಲ್ಲಿ ಮೃತರ ಆತ್ಮಕ್ಕೆ ಶಾಂತಿ ದೊರಕಿಸಲು, ಪ್ರವಾಸಿಗರ ಮೇಲೆ ದಾಳಿ ನಡೆಸಿದ ಎಲ್ಲಾ ಉಗ್ರರನ್ನು ಸದೆ ಬಡೆಯಬೇಕು. ಇನ್ನೂ ಇಂತಹ ದುಸಹಾಸಕ್ಕೆ ಕೈ ಹಾಕದಂತೆ ಉಗ್ರರಿಗೆ ಎಚ್ಚರಿಕೆಯ ಕರೆ ಗಂಟೆ ನೀಡಬೇಕು ಎಂಬುದು ದೇಶದ ಎಲ್ಲಾ ಮುಸ್ಲಿಂರ ಒಕ್ಕೊರಲಿನ ಪ್ರಾರ್ಥನೆಯಾಗಿದೆ ಎಂದರು.

ಅಲ್ಪಸಂಖ್ಯಾತ ಮುಖಂಡರಾದ ಅಫ್ಸರ್ ಖಾನ್ ಮಾತನಾಡಿ,ಭಾರತೀಯ ಸೇನೆ ಬಲಿಷ್ಠವಾಗಿದೆ.ನಮ್ಮ ಸೇನೆಗೆ ನೈತಿಕ ಬಲ ತುಂಬುವ ನಿಟ್ಟಿನಲ್ಲಿ ನಾವು ಇಂದು ಶುಕ್ರವಾರದ ನಮಾಜಿನ ವೇಳೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಗಿದೆ. ಸೇನಾ ಕಾರ್ಯಾಚರಣೆ ವೇಳೆ ನಮ್ಮ ದೇಶದ ಒಗ್ಗಟ್ಟು ಪ್ರದರ್ಶನಗೊಂಡಿದೆ. ಹಿಂದು, ಮುಸ್ಲಿಂ, ಕ್ರೈಸ್ತ,ಶಿಖ್, ಪಾರ್ಸಿ ಎಲ್ಲರೂ ಸೇರಿದಾಗ ಮಾತ್ರ ಎಂಬುದನ್ನು ಕಾರ್ಯಾಚರಣೆಯ ಫೋಟೋಗಳೇ ಸಾಭಿತು ಮಾಡಿವೆ.ಇಡೀ ಮುಸ್ಲಿಂ ಸಮುದಾಯ ಭಾರತದ ಸೇನೆಯೊಂದಿಗೆ ಇದೆ ಎಂದರು.

ಸಾಮೂಹಿಕ ಪ್ರಾರ್ಥನೆಯಲ್ಲಿ ಮೌಲಾನ ಯಾಸೀನ್ ಸಾಬ್, ಮಸೀದಿ ಕಾರ್ಯದರ್ಶಿ ಅಬ್ದುಲ್ ಸುಭಾನ್, ತಾಜುದ್ದೀನ್ ಷರಿಫ್,ಸೈಯದ್ ಸುಭಾನ್ ಅಫ್ಸರ್ ಪಾಷ,ತನ್ವೀರ್, ಅದೀಬ್ ಅಹಮದ್, ಅಫ್ಸರ್ ಖಾನ್ ಮುಜಾಹಿದ್ ಪಾಷ, ಫಾರೂಕ್ ಅಹಮದ್ ಮತ್ತಿತರರು ಪಾಲ್ಗೊಂಡಿದ್ದರು.

## ಮೇ 11: ಶ್ರೀ ನರಸಿಂಹ ಜಯಂತಿ

ತುಮಕೂರು: ತುಮಕೂರು ತಾಲ್ಲೂಕು ಊರ್ಡಿಗೆರೆ ಹೋಬಳಿ ದೇವರಾಯನ ದುರ್ಗದ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ ಮೇ 11ರಂದು "ಶ್ರೀ ನರಸಿಂಹ ಜಯಂತಿ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಶ್ರೀ ನರಸಿಂಹ ಜಯಂತಿ ಅಂಗವಾಗಿ ಶ್ರೀ ಭೋಗ ಮತ್ತು ಯೋಗ ನರಸಿಂಹಸ್ವಾಮಿ ಹಾಗೂ ಅಮ್ಮನವರಿಗೆ ವಿಶೇಷ ಹೂವಿನ ಅಲಂಕಾರ, ಬೆಳಿಗ್ಗೆ 8 ಗಂಟೆಗೆ ಅಭಿಷೇಕ, 10 ಗಂಟೆಗೆ ಮಹಾಮಂಗಳಾರತಿ ಪೂಜಾ ಕಾರ್ಯಕ್ರಮಗಳು ನಡೆಯಲಿವೆ.

ಅಂದು ಬೆಳಿಗ್ಗೆ 11 ಗಂಟೆಗೆ ದೇವರಾಯನದುರ್ಗ ಶ್ರೀ ಲಕ್ಷ್ಮಿನರಸಿಂಹಸ್ವಾಮಿ ದೇವಸ್ಥಾನ ಹಾಗೂ ಪಂಡಿತನಹಳ್ಳಿ ಟಿ.ವಿ.ಎಸ್. ಇವರ ಸಹಯೋಗದಲ್ಲಿ ದಾಸವಾಣಿ ನಟರಾಜು ಮತ್ತು ತಂಡದವರಿಂದ ದಾಸರ ಪದಗಳ ಗಾಯನ ಕಾರ್ಯಕ್ರಮ ಹಾಗೂ ಮಧ್ಯಾಹ್ನ 12 ಗಂಟೆಗೆ ಶ್ರೀ ಸ್ವಾಮಿಯವರಿಗೆ ಹೂವಿನ ದಿವ್ಯಾಲಂಕೃತ ಕೈ ರಥದಲ್ಲಿ ಬೆಳ್ಳಿಯ ಗರುಡ ವಾಹನೋತ್ಸವ ಜರುಗಲಿದೆ.

ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪೂಜಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಶ್ರೀ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಸುನೀಲ್ ಕುಮಾರ್ ಎಸ್.ಟಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

